ಕರ್ನಾಟಕ ಸರ್ಕಾರ
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/83/ಸುತ್ತೋಲೆ/2022-23/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು ದಿನಾಂಕ:27.02.2023

**ಸುತ್ತೋಲೆ**

ವಿಷಯ: ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ e-rupee ವ್ಯವಸ್ಥೆಯನ್ನು ಅಳವಡಿಸಿರುವ ಸಂಬಂಧ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಬ್ಯಾಂಕ್ ಖಾತೆ VPA (Virtual Payment Address) ಯನ್ನು ಸಮಾಜ ಕಲ್ಯಾಣ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸಲ್ಲಿಸುವ ಬಗ್ಗೆ.

ಉಲ್ಲೇಖ: ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಕಇ/ಇಡಿ/03/ವಿ.ವೇತನ ಕೋಶ/ಸಿಆರ್/2022-23 ದಿನಾಂಕ:10.02.2023.

**********

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನವನ್ನು ಸಮಾಜ ಕಲ್ಯಾಣ ಇಲಾಖೆಯಿಂದ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಮೂಲಕ ಮಂಜೂರು ಮಾಡಲಾಗುತ್ತಿದ್ದು, ಅದರಂತೆ 2022-23ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಮಂಜೂರು ಮಾಡಲಾದ ವಿದ್ಯಾರ್ಥಿ ವೇತನದ ಮೊತ್ತವನ್ನು e-rupee ಮುಖಾಂತರ ಪಾವತಿ ಮಾಡಲು ಸಮಾಜ ಕಲ್ಯಾಣ ಇಲಾಖೆಯು ಕ್ರಮ ವಹಿಸಲಾಗಿರುತ್ತದೆ. E-rupee ಮೂಲಕ Generate ಮಾಡಲಾದ Voucher ಅನ್ನು Redeem ಮಾಡಿಕೊಳ್ಳಲು ಈ ಕೆಳಕಂಡ ಬ್ಯಾಂಕುಗಳಲ್ಲಿ ಮಾತ್ರ VPA (Virtual Payment Address) ಲಭ್ಯವಿದ್ದು, ಪಾವತಿ ಮಾಡಲು ಅವಕಾಶವಿರುತ್ತದೆ.

| | | |
|---|---|---|
| 1. State Bank of India | 2. Canara Bank | 3. Bank of Baroda |
| 4. Axis Bank | 5. Indian Bank | 6. HDFC Bank |
| 7. ICICI Bank | 8. Punjab National Bank | 9. UCO Bank |

ಆದ್ದರಿಂದ ಮೇಲೆ ತಿಳಿಸಿರುವ ಬ್ಯಾಂಕುಗಳ ಶಾಖೆಗಳಲ್ಲಿ ಖಾತೆಯನ್ನು ಹೊಂದಿರುವ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಪ್ರಾಂಶುಪಾಲರು ಸಂಸ್ಥೆಯ ಬ್ಯಾಂಕಿನ ನಿಖರವಾದ ವಿಳಾಸ VPA (Virtual Payment Address) ಪಡೆದು,

Branch Manager (Bank) ಮತ್ತು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರ ಜಂಟಿ ಸಹಿಯೊಂದಿಗೆ VPA ID ಯನ್ನು ಸಮಾಜ ಕಲ್ಯಾಣ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಕಡ್ಡಾಯವಾಗಿ ಈ ಕೂಡಲೇ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲಾಗಿದೆ)

ನಿರ್ದೇಶಕರು,
ಕಾಲೇಜು ಶಿಕ್ಷಣ ಇಲಾಖೆ.

ಇವರಿಗೆ:

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ - ಅಗತ್ಯ ಕ್ರಮಕ್ಕಾಗಿ.
2) ಪ್ರಾಂಶುಪಾಲರುಗಳು, ರಾಜ್ಯ ಎಲ್ಲಾ ಸರ್ಕಾರಿ, ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಿಗೆ – ಸೂಕ್ತ ಕ್ರಮಕ್ಕಾಗಿ.
3) ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ ಬೆಂಗಳೂರು.
4) ಕಛೇರಿ ಪ್ರತಿ.